# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 306(348)

ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ

(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 13-08-2025.

ಉತ್ತರಿಸುವ ಸಚಿವರು : ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ನಡೆಸಲ್ಪಡುವ ವಸತಿ ಗೃಹಗಳ ಸಂಖ್ಯೆ ಎಷ್ಟು? ಇಲ್ಲಿ ಆಶ್ರಯ ಪಡೆಯುತ್ತಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 13 ವಿದ್ಯಾರ್ಥಿನಿಲಯಗಳು ಕಾರ್ಯ ನಿರ್ವಹಿಸುತ್ತಿದ್ದು, ಇಲ್ಲಿ 802 ವಿದ್ಯಾರ್ಥಿಗಳು ಆಶ್ರಯ ಪಡೆದಿರುತ್ತಾರೆ.<br><br>ಉಡುಪಿ ಜಿಲ್ಲೆಯಲ್ಲಿ 04 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತಿದ್ದು, ಇಲ್ಲಿ 150 ವಿದ್ಯಾರ್ಥಿಗಳು ಆಶ್ರಯ ಪಡೆದಿರುತ್ತಾರೆ. |
| ಆ) | 2023-24, 2024-25ನೇ ಸಾಲಿನಲ್ಲಿ ಉಭಯ ಜಿಲ್ಲೆಯಲ್ಲಿ ನಡೆಸಲ್ಪಡುವ ವಸತಿ ಗೃಹಗಳಲ್ಲಿ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ; ಎಷ್ಟು ಮಂದಿಗೆ ಪ್ರವೇಶ ಅವಕಾಶ ನೀಡಲಾಗಿದೆ; ಪ್ರವೇಶ ದೊರಕದಿರುವ ವಿದ್ಯಾರ್ಥಿಗಳಿಗೆ ಯಾವ ವ್ಯವಸ್ಥೆ ಮಾಡಲಾಗಿದೆ;(ವಿವರ ನೀಡುವುದು) | 2023-24, 2024-25ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನಡೆಸಲ್ಪಡುವ ವಸತಿ ಗೃಹಗಳ ಮಾಹಿತಿಯನ್ನು **ಅನುಬಂಧ-01**ರಲ್ಲಿ ನೀಡಲಾಗಿದೆ.<br><br>ಮುಂದುವರೆದು, ಪ್ರವೇಶ ದೊರಕದಿರುವ ಅರ್ಹ ವಿದ್ಯಾರ್ಥಿಗಳಿಗೆ ಅನುದಾನ ಲಭ್ಯತೆಯನುಗುಣವಾಗಿ ವಿದ್ಯಾಸಿರಿ ಯೋಜನೆಯಡಿ ಸಹಾಯಧನ ನೀಡಲಾಗುತ್ತಿದೆ. |
| ಇ) | 2025-26ನೇ ಸಾಲಿನಲ್ಲಿ ಎಷ್ಟು ಹಾಸ್ಟೆಲ್ ನಿರ್ಮಾಣ ಮಾಡಲು ಇಲಾಖೆ ಕ್ರಮ ಕೈಗೊಂಡಿದೆ; ಎಷ್ಟು ಹೆಚ್ಚುವರಿ ಸೀಟುಗಳು ದೊರೆಯುತ್ತದೆ; ಉಭಯ ಜಿಲ್ಲೆಯಲ್ಲಿ ಒಟ್ಟು ಎಷ್ಟು ಹಾಸ್ಟೆಲ್ ನಡೆಸಲಾಗುತ್ತದೆ? (ವಿವರ ನೀಡುವುದು) | 2024-25ನೇ ಸಾಲಿನಲ್ಲಿ ಹೊಸದಾಗಿ ದಕ್ಷಿಣ ಕನ್ನಡ ಜಿಲ್ಲೆಗೆ 5 ವಿದ್ಯಾರ್ಥಿನಿಲಯಗಳು ಹಾಗೂ ಉಡುಪಿ ಜಿಲ್ಲೆಗೆ 2 ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಿದ್ದು, ಹೆಚ್ಚುವರಿ ಕ್ರಮವಾಗಿ 600 ನಿಲಯಾರ್ಥಿಗಳು ಹಾಗೂ 200 ನಿಲಯಾರ್ಥಿಗಳಿಗೆ ಪ್ರವೇಶಾತಿ ಕಲ್ಪಿಸಲಾಗಿದೆ.<br>ಮುಂದುವರೆದು, ನಿವೇಶನದ ಲಭ್ಯತೆಗೆ ಅನುಗುಣವಾಗಿ ಸದರಿ ಜಿಲ್ಲೆಗಳಲ್ಲಿ ಮಂಜೂರಾಗಿರುವ ಹೊಸ ಹಾಸ್ಟೆಲ್ ಗಳಿಗೆ ಕಟ್ಟಡ ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ.<br><br>2025-26ನೇ ಸಾಲಿನಲ್ಲಿ ಬೇಡಿಕೆ ಅನುಗುಣವಾಗಿ ಹಾಸ್ಟೆಲ್ ನಿರ್ಮಾಣ ಮಾಡಲು ಕ್ರಮವಹಿಸಲಾಗುವುದು. |

**ಸಂಖ್ಯೆ:**MWD-LMQ/192/2025

**(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

# ಅನುಬಂಧ-01

| ಕ್ರ.ಸಂ | ಜಿಲ್ಲೆ | ವಿವರ | 2023-24ನೇ ಸಾಲು | 2024-25ನೇ ಸಾಲು |
|---|---|---|---|---|
| 1 | ದಕ್ಷಿಣ ಕನ್ನಡ | ವಿದ್ಯಾರ್ಥಿನಿಲಯಗಳ ಸಂಖ್ಯೆ | 7 | 13 |
| | | ಒಟ್ಟು ಮಂಜೂರಾತಿ ಸಂಖ್ಯೆ | 575 | 1175 |
| | | ಸ್ವೀಕೃತವಾದ ಅರ್ಜಿಗಳ ಸಂಖ್ಯೆ | 1275 | 2635 |
| | | ಅರ್ಹ ಅರ್ಜಿಗಳಲ್ಲಿ ಪ್ರವೇಶಾತಿ ನೀಡಿದ ಸಂಖ್ಯೆ | 522 | 816 |
| | | ವಿದ್ಯಾಸಿರಿ ಯೋಜನೆಯಡಿ ಅರ್ಹ ವಿದ್ಯಾರ್ಥಿಗಳ ಸಂಖ್ಯೆ | 420 | 760 |
| 2 | ಉಡುಪಿ | ವಿದ್ಯಾರ್ಥಿನಿಲಯಗಳ ಸಂಖ್ಯೆ | 2 | 4 |
| | | ಒಟ್ಟು ಮಂಜೂರಾತಿ ಸಂಖ್ಯೆ | 150 | 350 |
| | | ಸ್ವೀಕೃತವಾದ ಅರ್ಜಿಗಳ ಸಂಖ್ಯೆ | 1507 | 798 |
| | | ಅರ್ಹ ಅರ್ಜಿಗಳಲ್ಲಿ ಪ್ರವೇಶಾತಿ ನೀಡಿದ ಸಂಖ್ಯೆ | 149 | 179 |
| | | ವಿದ್ಯಾಸಿರಿ ಯೋಜನೆಯಡಿ ಅರ್ಹ ವಿದ್ಯಾರ್ಥಿಗಳ ಸಂಖ್ಯೆ | 160 | 282 |

ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ಬೆಂಗಳೂರು